**All India Radio: Bangalore**
**Regional Bulletin In Kannada**
**10.08.2025 / 7.35am**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ಅವರಿಂದ ಇಂದು ನಮ್ಮ ಮೆಟ್ರೊ ಹಳದಿ ಮಾರ್ಗ ಉದ್ಘಾಟನೆ, ವಿವಿಧ ರೈಲು ಸೇವೆಗಳ ಲೋಕಾರ್ಪಣೆ

೨. ಹೊಸ ಪೀಳಿಗೆಯ ರೈಲುಗಳ ದೊಡ್ಡ ಪ್ರಮಾಣದ ಉತ್ಪಾದನೆ ಶೀಘ್ರದಲ್ಲೇ ಪ್ರಾರಂಭ- ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

೩. ಹಸಿರು ಕ್ರಾಂತಿಗೆ ಎಂ.ಎಸ್.ಸ್ವಾಮಿನಾಥನ್ ಅವರಿಂದ ವೈಜ್ಞಾನಿಕ ಅಡಿಪಾಯ - ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು

೪. ಚೆನ್ನೈ ಗ್ರ್ಯಾಂಡ್ ಮಾಸ್ಟರ್ಸ್ ಚೆಸ್ ಪಂದ್ಯಾವಳಿ: ಅಮೆರಿಕದ ರೇ ರಾಬ್ಸನ್ ವಿರುದ್ಧ ಭಾರತದ ಅರ್ಜುನ್ ಎರಿಗೈಸಿಗೆ ಗೆಲುವು

><><><><><><><><><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಂಗಳೂರಿನಲ್ಲಿ ವಿವಿಧ ರೈಲ್ವೆ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದು, ವಿವಿಧ ರೈಲು ಸೇವೆಗಳ ಲೋಕಾರ್ಪಣೆ ಮಾಡಲಿದ್ದಾರೆ. ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಲ್ಲಿ ಮೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೆ ಹಸಿರು ನಿಶಾನೆ ತೋರಿಸಲಿದ್ದಾರೆ. ಬೆಂಗಳೂರು-ಬೆಳಗಾವಿ, ಅಮೃತಸರ-ಶ್ರೀಮಾತಾ ವೈಷ್ಣೋದೇವಿ ಕಟ್ರಾ ಹಾಗೂ ನಾಗ್ಪುರ- ಪುಣೆ ವಂದೇ ಭಾರತ್ ಎಕ್ಸ್‌ಪ್ರೆಸ್‌ಗಳು ಇವುಗಳಲ್ಲಿ ಸೇರಿವೆ. ನಂತರ ಪ್ರಧಾನಿಯವರು ನಮ್ಮ ಮೆಟ್ರೋ ಹಳದಿ ಮಾರ್ಗದ ಕಾರ್ಯಾಚರಣೆಗೆ ಚಾಲನೆ ನೀಡಲಿದ್ದಾರೆ ಹಾಗೂ ಆರ್.ವಿ. ರಸ್ತೆಯ ಮೆಟ್ರೋ ನಿಲ್ದಾಣದಿಂದ ರಾಗಿಗುಡ್ಡ ಮಾರ್ಗವಾಗಿ ಎಲೆಕ್ಟ್ರಾನಿಕ್ ಸಿಟಿ ಮೆಟ್ರೋ ನಿಲ್ದಾಣದವರೆಗೆ ಪ್ರಯಾಣಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಪ್ರಧಾನಿಯವರು ವಿವಿಧ ನಗರ ಸಂಪರ್ಕ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿ, ಸಾರ್ವಜನಿಕರನ್ನು ಉದ್ದೇಶಿಸಿ

ಮತನಾಡಲಿದ್ದಾರೆ. ಸುಮಾರು ೧೫ ಸಾವಿರದ ೬೧೦ ಕೋಟಿ ರೂಪಾಯಿ ವೆಚ್ಚದ ಬೆಂಗಳೂರು ಮೆಟ್ರೋ ೩ನೇ ಹಂತದ ಯೋಜನೆಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಸುಮಾರು ೪೪ ಕಿಲೋಮೀಟರ್ ಉದ್ದದ ಈ ಮಾರ್ಗ ೩೧ ನಿಲ್ದಾಣಗಳನ್ನು ಹೊಂದಿರಲಿದೆ. ಈ ಕುರಿತು ನಮ್ಮ ಬಾತ್ಮೀದಾರರಿಂದ ಹೆಚ್ಚಿನ ಮಾಹಿತಿ ನೀಡಲಾಗಿದೆ.

ಧ್ವನಿ : ಸುಧೀಂದ್ರ, ಬಾತ್ಮೀದಾರರು, ( ೪೭ ಸೆಕೆಂಡುಗಳು)

><><><><><><><><><><

ಪ್ರಧಾನಿ ನರೇಂದ್ರ ಮೋದಿ ಪರಿಚಯಿಸಿದ ಹೊಸ ಪೀಳಿಗೆಯ ರೈಲುಗಳ ದೊಡ್ಡ ಪ್ರಮಾಣದ ಉತ್ಪಾದನೆಯು ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಂದೇ ಭಾರತ್, ಅಮೃತ್ ಭಾರತ್ ಮತ್ತು ನಮೋ ಭಾರತ್ ರೈಲುಗಳನ್ನು ಪ್ರಯಾಣಿಕರು ಹೆಚ್ಚು ಮೆಚ್ಚುತ್ತಿದ್ದಾರೆ. ದೊಡ್ಡ ಪ್ರಮಾಣದಲ್ಲಿ ಇದರ ಉತ್ಪಾದನೆ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ಹೇಳಿದರು. ಮುಂದಿನ ತಿಂಗಳ ವೇಳೆಗೆ ವಂದೇ ಭಾರತ್ ಸ್ಲೀಪರ್ ಸಿದ್ಧವಾಗಲಿದೆ. ತಮಿಳುನಾಡಿನ ಹೊಸೂರು ಮತ್ತು ಬೆಂಗಳೂರಿಗೆ ಸಂಪರ್ಕಿಸಲು ನಾಲ್ಕು ಮಾರ್ಗಗಳ ರೈಲು ಜಾಲವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು. ಕರ್ನಾಟಕದಲ್ಲಿ ರೈಲ್ವೆ ಜಾಲದ ಅಭಿವೃದ್ಧಿಯ ಬಗ್ಗೆ ಮಾತನಾಡಿದ ಸಚಿವರು, ತಮ್ಮ ಸರ್ಕಾರದ ಅಡಿಯಲ್ಲಿ ರಾಜ್ಯಕ್ಕೆ ಅನುದಾನ ಹಂಚಿಕೆಯಲ್ಲಿ ಒಂಬತ್ತು ಪಟ್ಟು ಏರಿಕೆಯಾಗಿದೆ ಎಂದು ಹೇಳಿದರು. ೨೦೦೯ ಮತ್ತು ೨೦೧೪ ರ ನಡುವೆ ಅನುದಾನ ಹಂಚಿಕೆ ಕೇವಲ ೮೩೫ ಕೋಟಿ ರೂಪಾಯಿಗಳಾಗಿದ್ದು, ೨೦೨೫-೨೬ರ ಅವಧಿಯಲ್ಲಿ ಅನುದಾನ ಹಂಚಿಕೆ ೭ ಸಾವಿರದ ೫೬೪ ಕೋಟಿ ರೂಪಾಯಿಗಳಾಗಿವೆ. ರಾಜ್ಯದಲ್ಲಿ ೫೪ ಸಾವಿರ ಕೋಟಿ ರೂಪಾಯಿಗಳ ರೈಲ್ವೆ ಮೂಲಸೌಕರ್ಯ ಕಾಮಗಾರಿಗಳು ನಡೆಯುತ್ತಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು. ಅಮೃತ್ ಸ್ಟೇಷನ್ ಯೋಜನೆಯಡಿಯಲ್ಲಿ ೬೧ ರೈಲು ನಿಲ್ದಾಣಗಳನ್ನು ಸಂಪೂರ್ಣವಾಗಿ ಪುನರ್ ನಿರ್ಮಿಸಲಾಗಿದೆ. ೧೨೩ ಮೇಲ್ಸೇತುವೆಗಳು ಮತ್ತು ಕೆಳಸೇತುವೆಗಳನ್ನು ನಿರ್ಮಿಸಲಾಗಿದೆ. ಹೊಸ ರೈಲುಗಳನ್ನು ಪ್ರಾರಂಭಿಸಲಾಗಿದೆ. ವಿದ್ಯುದ್ದೀಕರಣ ಮತ್ತು ದ್ವಿಪಥ ಕಾಮಗಾರಿಗಳು ವೇಗವಾಗಿ ನಡೆಯುತ್ತಿವೆ ಎಂದ ಅವರು, ಹಾಸನ-ಮಂಗಳೂರು ವಿದ್ಯುದ್ದೀಕರಣವನ್ನು ಈಗ ಕೇಂದ್ರ ಸರ್ಕಾರ ಸಂಪೂರ್ಣವಾಗಿ ಕೈಗೆತ್ತಿಕೊಳ್ಳಲಿದೆ ಎಂದು ಘೋಷಿಸಿದರು.

ಧ್ವನಿ: ಅಶ್ವಿನಿ ವೈಷ್ಣವ್, ರೈಲ್ವೆ ಸಚಿವ ( ೩೪ ಸೆಕೆಂಡುಗಳು)

ಕೇಂದ್ರ ಮತ್ತು ರಾಜ್ಯ ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಸಾರಿಗೆ ವ್ಯವಸ್ಥೆ ಮತ್ತು ನಗರಾಭಿವೃದ್ಧಿ ಯಶಸ್ವಿಯಾಗುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

><><><><><><><><><><><><><><><

ಭಾರತದಲ್ಲಿ ಹಸಿರು ಕ್ರಾಂತಿ ಮುನ್ನಡೆಸಿದ್ದ ಎಂ.ಎಸ್.ಸ್ವಾಮಿನಾಥನ್ ಅವರನ್ನು ರಾಷ್ಟ್ರವು ಮರೆಯಲು ಸಾಧ್ಯವಿಲ್ಲ ಎಂದು ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಎಂ.ಎಸ್.ಸ್ವಾಮಿನಾಥನ್ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಪ್ರೊಫೆಸರ್ ಸ್ವಾಮಿನಾಥನ್ ಒಬ್ಬ ಯೋಜಕ, ವಿಜ್ಞಾನಿ ಮತ್ತು ಸಂಶೋಧಕರಾಗಿದ್ದರು. ಅವರ ದೂರದೃಷ್ಟಿಯ ಕೆಲಸವು ಭಾರತದ ಹಣೆಬರಹವನ್ನು ಬದಲಾಯಿಸಿತು ಎಂದರು. ದೇಶವು ತೀವ್ರ ಆಹಾರದ ಕೊರತೆಯನ್ನು ಎದುರಿಸುತ್ತಿದ್ದ ಸಮಯದಲ್ಲಿ, ಭಾರತೀಯ ತಳಿಶಾಸ್ತ್ರಜ್ಞರಾದ ಎಂ.ಎಸ್.ಸ್ವಾಮಿನಾಥನ್ ಅವರು ಹಸಿರು ಕ್ರಾಂತಿಗೆ ವೈಜ್ಞಾನಿಕ ಅಡಿಪಾಯ ಹಾಕಿದರು ಎಂದು ಅವರು ಹೇಳಿದರು. ಆಹಾರ ಭದ್ರತೆಯು ಕೇವಲ ಕ್ಯಾಲೋರಿಗಳ ಬಗ್ಗೆ ಅಲ್ಲ. ಆದರೆ ಪೋಷಣೆ ಮತ್ತು ಯೋಗಕ್ಷೇಮದ ಬಗ್ಗೆ ಎಂಬುದು ಪ್ರೊಫೆಸರ್ ಸ್ವಾಮಿನಾಥನ್ ಅವರ ನಂಬಿಕೆಯಾಗಿತ್ತು. ಈ ದೃಷ್ಟಿಕೋನವು ಹಸಿವು ಮುಕ್ತ ಭಾರತ ಮತ್ತು ಹಸಿವು ಮುಕ್ತ ಪ್ರಪಂಚದ ದೃಷ್ಟಿಕೋನವನ್ನು ರೂಪಿಸಿದೆ ಎಂದು ವೆಂಕಯ್ಯ ನಾಯ್ಡು ಪ್ರತಿಪಾದಿಸಿದರು.

><><><><><><><><><><><><><><><><

೨೦೧೯ ರಿಂದ ಆರು ವರ್ಷಗಳ ಕಾಲ ಒಂದೇ ಒಂದು ಚುನಾವಣೆಯಲ್ಲಿ ಸ್ಪರ್ಧಿಸುವ ಅಗತ್ಯ ಷರತ್ತನ್ನು ಪೂರೈಸಲು ವಿಫಲವಾದ ೩೩೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಈ ೩೩೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳು ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿವೆ.

><><><><><><><><><><><><><><><><

ಇಂದು ವಿಶ್ವ ಸಿಂಹ ದಿನವನ್ನು ಜಗತ್ತಿನಾದ್ಯಂತ ಆಚರಿಸಲಾಗುತ್ತಿದೆ. ಏಷ್ಯಾಟಿಕ್ ಸಿಂಹದ ಸಂರಕ್ಷಣೆಯಲ್ಲಿ ಗುಜರಾತ್ ಪ್ರಮುಖ ಮೈಲಿಗಲ್ಲು ಸಾಧಿಸಿದೆ. ಪೋರಬಂದರ್ ಬಳಿಯ ಬರ್ದಾ

ವನ್ಯಜೀವಿ ಅಭಯಾರಣ್ಯವು ಪರಿಸರ ಪುನಃಸ್ಥಾಪನೆ ಮತ್ತು ಸಮುದಾಯ-ಚಾಲಿತ ಪ್ರಗತಿಯ ದಾರಿದೀಪವಾಗಿ ಹೊರಹೊಮ್ಮಿದೆ. ೨೦೨೫ ರ ಗುಜರಾತ್‌ನ ಸಿಂಹ ಗಣತಿಯ ಪ್ರಕಾರ, ರಾಜ್ಯವು ೮೯೧ ಸಿಂಹಗಳನ್ನು ಹೊಂದಿದೆ.

><><><><><><><><><><

ಉಕ್ರೇನ್ ಯುದ್ಧ ವಿಷಯವಾಗಿ, ಅಲಾಸ್ಕಾದಲ್ಲಿ ಆಗಸ್ಟ್ ೧೫ ರಂದು ರಷ್ಯಾ ಅಧ್ಯಕ್ಷ ಪುಟಿನ್ ಅವರನ್ನು ಭೇಟಿ ಮಾಡುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಈ ಭೇಟಿಯ ಬಗೆಗೆ ಉಕ್ರೇನ್ ಅಧ್ಯಕ್ಷ ವ್ಲಾಡಿಮಿರ್ ಝುಲೆನ್ಸ್ಕಿ ಪ್ರತಿಕ್ರಿಯಿಸಿದ್ದು, ರಷ್ಯಾದೊಂದಿಗೆ ಗಡಿ ಸಂಬಂಧಿತವಾಗಿ ಯಾವುದೇ ವಿನಾಯಿತಿ ನೀಡುವುದಿಲ್ಲ ಎಂದಿದ್ದಾರೆ. ಉಕ್ರೇನ್ ಪ್ರಜೆಗಳು ತಮ್ಮ ನೆಲವನ್ನು ಬಿಟ್ಟುಕೊಡಲು ಸಿದ್ಧವಿಲ್ಲ  ಎಂದಿರುವ ಝುಲೆನ್ಸ್ಕಿ, ಶಾಂತಿ ಪರಿಹಾರದ ಪ್ರಕ್ರಿಯೆಯಲ್ಲಿ ಉಕ್ರೇನ್ ಖಂಡಿತ ಒಳಗೊಳ್ಳಬೇಕು. ಸಮಸ್ಯೆಯ ಪರಿಹಾರಕ್ಕಾಗಿ ಸಹಭಾಗಿ ದೇಶಗಳೊಂದಿಗೆ ಉಕ್ರೇನ್ ಕಾರ್ಯನಿರ್ವಹಿಸಲು ಸಿದ್ಧವಿದೆ ಎಂದಿದ್ದಾರೆ. ಇದೇ ವೇಳೆ, ರಷ್ಯಾ ಅಧ್ಯಕ್ಷರನ್ನು ಭೇಟಿ ಮಾಡುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿರ್ಧಾರವನ್ನು ಭಾರತ ಸ್ವಾಗತಿಸಿದೆ.

><><><><><><><><><><

ವಿಶ್ವದ ೫ನೇ ಶ್ರೇಯಾಂಕಿತ ಭಾರತೀಯ ಗ್ರ್ಯಾಂಡ್‌ಮಾಸ್ಟರ್ ಅರ್ಜುನ್ ಎರಿಗೈಸಿ ಅವರು ತಮ್ಮ ಅದ್ಭುತ ಪ್ರದರ್ಶನದಿಂದಾಗಿ, ನಿನ್ನೆ ನಡೆದ ಕ್ವಾಂಟ್‌ಬಾಕ್ಸ್ ಚೆನ್ನೈ ಗ್ರ್ಯಾಂಡ್ ಮಾಸ್ಟರ್ಸ್ ಚೆಸ್ ಪಂದ್ಯಾವಳಿಯ ಮೂರು ಸುತ್ತುಗಳ ನಂತರ ಅವರು ಅಮೆರಿಕದ ಗ್ರ್ಯಾಂಡ್‌ಮಾಸ್ಟರ್ ರೇ ರಾಬ್ಸನ್ ಅವರನ್ನು ಸೋಲಿಸಿ, ಎರಡನೇ ಸ್ಥಾನದಲ್ಲಿ ಉಳಿದಿದ್ದಾರೆ.

><><><><><><><><><><